ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಮಹಾನಗರ ಪಾಲಿಕೆಯ ಆಸ್ತಿ ತೆರಿಗೆಯ ಉಪಯೋಗದ ಬಗ್ಗೆ

ಶ್ರೀ ಎಸ್. ಎಲ್. ಭೋಜೇಗೌಡ(ಶಿಕ್ಷಕರ ಕ್ಷೇತ್ರ):-

484 (497) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಾರ್ವಜನಿಕ ಗ್ರಂಥಾಲಯ ಕಾಯ್ದೆಯಡಿ ಸಾರ್ವಜನಿಕರು ಮಹಾನಗರ ಪಾಲಿಕೆಗಳಿಗೆ ಪಾವತಿಸುವ ಆಸ್ತಿ ತೆರಿಗೆಯಲ್ಲಿ ಶೇ. 6ರ ಮೊತ್ತವನ್ನು ಗ್ರಂಥಾಲಯ ಪ್ರಾಧಿಕಾರಿಗಳಿಗೆ ಪಾವತಿಸಬೇಕಾಗಿದೆಯೇ;

(ಆ) ಹಾಗಿದ್ದಲ್ಲಿ, ಮೈಸೂರು ಮಹಾನಗರ ಪಾಲಿಕೆಯವರು ವಸೂಲಿ ಮಾಡಿದ ಗ್ರಂಥಾಲಯ ಕರವೆಷ್ಟು; ಇದನ್ನು ಯಾವುದಕ್ಕೆ ಬಳಕೆ ಮಡಿಕೊಳ್ಳಲಾಗಿದೆ; (ವಿವರ ನೀಡುವುದು)

(ಇ) ಗ್ರಂಥಾಲಯದ ಕರವನ್ನು ಪ್ರತ್ಯೇಕವಾಗಿ ಮೀಸಲಿರಿಸದೆ ಅನ್ಯ ವೆಚ್ಚಗಳಿಗೆ ಉಪಯೋಗಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ?